OS 68/2015 DW-3

**ದಿನಾಂಕಃ 07-01-2026 ರಂದು** ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

**<u>ಪಾಟೀ ಸವಾಲುಃ ವಾದಿ ಪರ ವಕೀಲರಿಂದಃ</u>**

1. ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರ ದಲ್ಲಿರುವ ವಿಚಾರ ನನಗೆ ಗೊತ್ತಿಲ್ಲ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದಲ್ಲಿರುವ ವಿಚಾರವನ್ನು ನನ್ನ ವಕೀಲರು ಬರೆಸಿರುತ್ತಾರೆ. ಹುಚ್ಚಪ್ಪನ ಮಗ ಮನೋಜ್ ಕರೆದ ಕಾರಣ ಬಂದು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿ. ಆತನು ಹೇಳಿಕೊಟ್ಟ ಹಾಗೆ ನಾನು ಈ ದಿನ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಈ ದಿನ ನ್ಯಾಯಾಲಯಕ್ಕೆ ಅವನೇ ಕರೆದುಕೊಂಡು ಬಂದಿರುತ್ತಾನೆ ಎಂದರೆ ಸರಿ.

2. ಗಿರಿಜೇಶ್ ನನ್ನ ತಂದೆ ಎಂದು ತೋರಿಸಲು ನ್ಯಾಯಾಲಯಕ್ಕೆ ದಾಖಲೆ ಹಾಜರುಪಡಿಸಿರುವುದಿಲ್ಲ ಎಂದರೆ ಸರಿ. ನನಗೆ ನ್ಯಾಯಾಲಯದ ಕಲಾಪಗಳಲ್ಲಿ ಸಾಕ್ಷ್ಯ ವಿಚಾರಣೆಯ ಅನುಭವವಿದೆ ಎಂದರೆ ಸರಿಯಲ್ಲ. ನಿಪಿ-7 (ಬಿ) ಮತ್ತು (ಸಿ) ಸಹಿಗಳು ನನ್ನ ತಂದೆಯವರದ್ದೇ ಎಂದು ತೋರಿಸಲು ಅಧಿಕೃತ ದಾಖಲೆ ಹಾಜರುಪಡಿಸಿರುವುದಿಲ್ಲ. ಪ್ರತಿವಾದಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಕಂಪ್ಯೂಟರೀಕರಣಗೊಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ. ಹೇ. ಕೇ. ಸರಿ. ಇದೆ.

ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಮ್.ಎಫ್.ಸಿ. ಶಿರಾ.